# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 404 |
| ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ (ಛಲವಾದಿ) ಟಿ. ನಾರಾಯಣಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 10.07.2023 |
| ಉತ್ತರಿಸುವ ಸಚಿವರು | : | ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದಲ್ಲಿ ಪ್ರಸ್ತುತ ಬಿ.ಪಿ.ಎಲ್/ಎ.ಪಿ.ಎಲ್. ಪಡಿತರ ಚೀಟಿಗಳನ್ನು ಹೊಂದಿರುವ ಕುಟುಂಬಗಳ ಸಂಖ್ಯೆ ಎಷ್ಟು; ಬಿ.ಪಿ.ಎಲ್ ./ಎ.ಪಿ.ಎಲ್. ಪಡಿತರ ಚೀಟಿಯನ್ನು ಪಡೆಯಲು ಸರ್ಕಾರ ನಿಗದಿಪಡಿಸಿರುವ ಮಾನದಂಡಗಳೇನು;</td><td>ರಾಜ್ಯದಲ್ಲಿರುವ ಪಡಿತರ ಚೀಟಿಗಳ ವಿವರ ಈ ಕೆಳಕಂಡಂತಿದೆ.
<table>
<tr><td>ಅಂತ್ಯೋದಯ ಅನ್ನ ಯೋಜನೆ</td><td>1089990</td></tr>
<tr><td>ಆದ್ಯತಾ</td><td>11726296</td></tr>
<tr><td>ಆದ್ಯತೇತರ</td><td>2489436</td></tr>
</table>
ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಯನ್ನು ಪಡೆಯಲು ಈ ಕೆಳಕಂಡಂತೆ ಹೊರಗಿಡುವ ಮಾನದಂಡಗಳನ್ನು ರೂಪಿಸಲಾಗಿದೆ.<br>
• ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ ಮಂಡಳಿಗಳು/ನಿಗಮಗಳು/ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ವ್ಯಾಟ್/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.<br>
• ಗ್ರಾಮೀಣ ಪ್ರದೇಶಗಲಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>
• ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ</td></tr>
</table>

| | | |
|---|---|---|
| | | ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>· ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು. |
| ಆ | ಬಿ.ಪಿ.ಎಲ್./ಎ.ಪಿ.ಎಲ್. ಪಡಿತರ ಚೀಟಿಗಳನ್ನು ಯಾವ ನಿಯಮದ ಅನುಸಾರ ರದ್ದುಪಡಿಸಲಾಗುತ್ತದೆ; ರದ್ದು ಪಡಿಸುವ ಅಧಿಕಾರ ಮತ್ತು ಹೊಸ ಪಡಿತರ ಚೀಟಿಗಳನ್ನು ನೀಡುವ ಅಧಿಕಾರ ಯಾರಿಗಿದೆ; | ರಾಜ್ಯ ಸರ್ಕಾರವು ರೂಪಿಸಿರುವ ಮಾನದಂಡಗಳಿಗೆ ವಿರುದ್ಧವಾಗಿ ಅನರ್ಹರು ಆದ್ಯತಾ/ಅಂತ್ಯೋದಯ ಅನ್ನ ಯೋಜನೆ ಪಡಿತರ ಚೀಟಿಯನ್ನು ಹೊಂದಿದ್ದಲ್ಲಿ ಅಂತಹ ಪಡಿತರ ಚೀಟಿಯನ್ನು ಆದ್ಯತೇತರ ಪಡಿತರ ಚೀಟಿಯನ್ನಾಗಿ ಪರಿವರ್ತಿಸಲಾಗುತ್ತಿದೆ. ಪಡಿತರ ಚೀಟಿಗಳ ವಿತರಣೆ ಮತ್ತು ರದ್ದು ಪಡಿಸುವ ಅಧಿಕಾರವನ್ನು ಸಂಬಂಧಪಟ್ಟ ತಾಲ್ಲೂಕಿನ ಆಹಾರ ನೀರಿಕ್ಷಕರು / ಆಹಾರ ಶಿರಸ್ತೆದಾರರಿಗೆ ನೀಡಲಾಗಿದೆ. |
| ಇ | ಹೊಸ ಬಿ.ಪಿ.ಎಲ್./ಎ.ಪಿ.ಎಲ್ ಪಡಿತರ ಚೀಟಿಗಾಗಿ ಅರ್ಜಿ ಸಲ್ಲಿಸಿರುವ ಅರ್ಹ ಫಲಾನುಭವಿಗಳಿಗೆ ಅರ್ಜಿ ಸಲ್ಲಿಸಿದ ದಿನಾಂಕದಿಂದ ಎಷ್ಟು ಸಮಯದ ಒಳಗಾಗಿ ಅವರಿಗೆ ಪಡಿತರ ಚೀಟಿಯನ್ನು ನೀಡಲಾಗುವುದು; ಅರ್ಜಿ ಸಲ್ಲಿಸಲು ಇರುವ ಕಾಲಮಿತಿ ಏನು?(ಸಂಪೂರ್ಣ ಮಾಹಿತಿಯನ್ನು ನೀಡುವುದು) | ಪಡಿತರ ಚೀಟಿಯನ್ನು ಕೋರಿ ಸಲ್ಲಿಸಿರುವ ಅರ್ಜಿಗಳಲ್ಲಿನ ಮಾಹಿತಿಯು ಸತ್ಯಾಸತ್ಯತೆ ಹಾಗೂ ವಾಸಸ್ಥಳ ಪರಿಶೀಲನೆ ಕಾರ್ಯವನ್ನು ಕೈಗೊಳ್ಳುವುದು ಅಗತ್ಯವಾಗಿರುತ್ತದೆ. ಅದರಂತೆ ಅಗತ್ಯ ಪರಿಶೀಲನೆ ಕೈಗೊಂಡು ಅರ್ಹ ಅರ್ಜಿದಾರರಿಗೆ ಅರ್ಜಿ ಸಲ್ಲಿಸಿರುವ ದಿನಾಂಕದ ಹಿರಿತನದ ಮೇಲೆ ಪಡಿತರ ಚೀಟಿಯನ್ನು ವಿತರಿಸುವ ಕಾರ್ಯ ಪ್ರಗತಿಯಲ್ಲಿದೆ. |

**ಆನಾಸ 126 ಡಿಆರ್ಎ 2023 (ಇ-ಆಫೀಸ್)**

(ಕೆ.ಹೆಚ್. ಮುನಿಯಪ್ಪ)

ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ

ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ

ಇಲಾಖಾ ಸಚಿವರು